ಕರ್ನಾಟಕ ಸರ್ಕಾರ

# ಗ್ರಾಮೀಣಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಚಿಕ್ಕಮಗಳೂರು

ಸ : ಕಾ.ಇ / ಗ್ರಾ.ನೀ.ಸ. & ನೈ.ವಿ.ಚಿ / / 2022-23 ದಿನಾಂಕ: 13.7.2022

-: ಅಧಿಸೂಚನೆ :-

**ವಿಷಯ:-** ಗ್ರಾಮೀಣ ಕುಡಿಯುವ ನೀರು& ನೈರ್ಮಲ್ಯ ವಿಭಾಗಕ್ಕೆ ಜಿಲ್ಲಾ ಯೋಜನಾ ವ್ಯವಸ್ಥಾಪಕರು (DPM) ಖಾಲಿ ಇರುವ ಹುದ್ದೆಗಳನ್ನು, ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಆನ್ ಲೈನ್ ಮೂಲಕ ಅರ್ಜಿ ಆಹ್ವಾಹಿನಿಸುವ ಕುರಿತು

ಉಲ್ಲೇಖ: 1) ನಿರ್ದೇಶಕರು, ಗ್ರಾ.ಕು.ನೀ & ನೈರ್ಮಲ್ಯ ಇಲಾಖೆ, ಬೆಂಗಳೂರು ಇವರ ಕಡತ ಸಂ. RDP/109RDWSSD/SBM -G/ HRD/ 2018 (Part-4) 31.5.2022

2) ಆಯುಕ್ತರು, ಗ್ರಾ.ಕು.ನೀ & ನೈ ಇಲಾಖೆ, ಬೆಂಗಳೂರು ರವರ ಪತ್ರಸಂ ಗ್ರಾಅಪ: ಗ್ರಾಕುನೀ& ನೈ/ ಸಿ-8/ಭೂ ವಿಜ್ಞಾನಿ/ 2017-18 /04.1.2019

***.

ಗ್ರಾಮೀಣ ಕುಡಿಯುವ ನೀರು& ನೈರ್ಮಲ್ಯ ವಿಭಾಗ ಚಿಕ್ಕಗಮಳೂರು ಇಲ್ಲಿ ಖಾಲಿ ಇರುವ ಈ ಕೆಳಕಂಡ ಹುದ್ದೆಗಳನ್ನು, ಮಾನವ ಸಂಪನ್ಮೂಲ ಸಂಸ್ಥೆಯ ಮೂಲಕ ಹೊರಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಆನ್ ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ.

| ಕ್ರಸಂ | ಹುದ್ದೆ | ಒಟ್ಟು ಹುದ್ದೆ | ವಿದ್ಯಾರ್ಹತೆ | ವಯಸ್ಸು | ಮಾಸಿಕ ಸಂಭಾವನೆ | ಷರಾ |
|---|---|---|---|---|---|---|
| 1 | ಜಿಲ್ಲಾ ಯೋಜನಾ ವ್ಯವಸ್ಥಾಪಕರು ( DPM) | 1 | The candidate is required to possess a Post Graduate degree in Management /Social science /Social work / relevant professional degree from a recognized university only. Minimum 8 years relevant experience in project management / leading a team of expert in development sectors preferably in water, sanitation and rural development | 45 ವರ್ಷ ಮೀರದಂತಹ | ರೂ 35000.00 | ಸಾರ್ವಜನಿಕರೊಂದಿಗೆ ಕನ್ನಡ ಭಾಷೆಯಲ್ಲಿ ವ್ಯವಹರಿಸಲು ಪೂರಕಜ್ಞಾನ ಹೊಂದಿರಬೇಕು |

1. ಅರ್ಜಿಸಲ್ಲಿಸಲು ಪ್ರಾರಂಭದ ದಿನಾಂಕ: 14.7.2022 ಮತ್ತು ಕೊನೆಯ ದಿನಾಂಕ: 21.07.2022
2. ಸರ್ಕಾರಿ ಕೆಲಸದ ಅವಧಿಯಲ್ಲಿ ಮಾತ್ರ ಆನ್‌ಲೈನ್ ಅರ್ಜಿಗಳನ್ನು ಸಲ್ಲಿಸತಕ್ಕದ್ದು ಬೆಳಿಗ್ಗೆ 10:00 ಗಂಟೆಯಿಂದ ಸಂಜೆ 05:30 ಗಂಟೆಯವರೆಗೆ. (ಸರ್ಕಾರಿ ರಜೆಯ ದಿನ ಆನ್ಲೈನ್ ಅರ್ಜಿಗಳು ಸ್ವೀಕೃತಿಯಾಗುವುದಿಲ್ಲ.)

3 ಅರ್ಜಿಗಳನ್ನು: https://chikkamagaluru.nic.in ವೆಬ್ಸೈಟ್‌ನ ಮುಖಾಂತರ ಅರ್ಜಿ ಸಲ್ಲಿಸುವುದು.

## ಆಯ್ಕೆ ವಿಧಾನ ಹಾಗೂ ಷರತ್ತುಗಳು.

1. ಆಯ್ಕೆಯಾದ ಅಭ್ಯರ್ಥಿಯನ್ನು ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲಾಗುವುದು.
2. ನಿಗದಿಪಡಿಸಿದ ಹುದ್ದೆಗಳಿಗೆ ಅನುಗುಣವಾಗಿ ವಿದ್ಯಾರ್ಹತೆ ಹೊಂದಿರಬೇಕು.
3. ನೇಮಕಾತಿ ಅವಧಿಯು 11 ತಿಂಗಳಾಗಿದ್ದು, ಇವರ ಕಾರ್ಯಕ್ಷಮತೆ ಪರಿಶೀಲಿಸಿ ಮುಂದುವರೆಸುವ ಬಗ್ಗೆ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾಪಂಚಾಯಿತಿ, ಚಿಕ್ಕಮಗಳೂರು ರವರು ತೀರ್ಮಾನ ಕೈಗೊಳ್ಳುವರು.
4. ದಾಖಲಾತಿ ಪರಿಶೀಲನೆ ನಂತರ ಅರ್ಹ ಅಭ್ಯರ್ಥಿಗಳನ್ನು ಮೆರಿಟ್ ಆಧಾರದ ಮೇಲೆ ಆಯ್ಕೆ ಮಾಡಲು ನಿಗಧಿಪಡಿಸಿದ ವಿದ್ಯಾರ್ಹತೆ ಮತ್ತು ಅನುಭವವನ್ನು ಪರಿಗಣಿಸಿ ಈ ಕೆಳಕಂಡ ಮಾನದಂಡಗಳಲ್ಲಿ ಮೆರಿಟ್ಪಟ್ಟಿ ತಯಾರಿಸುವುದು.

5.ಒಂದು ವೇಳೆಮೆರಿಟ್ ಆಧಾರದ ಮೇರೆಗೆ ಆಯ್ಕೆಯಾದ ಅಭ್ಯರ್ಥಿಗಳು ಕರ್ತವ್ಯಕ್ಕೆ ಹಾಜರಾಗದಿದ್ದಲ್ಲಿ, ಅಂತಹ ಅಭ್ಯರ್ಥಿಗಳ ಆಯ್ಕೆಯನ್ನು ರದ್ದುಗೊಳಿಸುವುದು ಮತ್ತುಮೆರಿಟ್ ಆಧಾರದಲ್ಲಿ ನಂತರದ ಜ್ಯೇಷ್ಠತೆ ಪಟ್ಟಿಯಲ್ಲಿರುವ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸುವುದು.

6. ಜಲಜೀವನ್ ಮಿಷನ್ ಯೋಜನೆಯಡಿ ಕಾರ್ಯನಿರ್ವಹಿಸಿದ ಅನುಭವ ಹೊಂದಿದ್ದರೆ 0 ಆದ್ಯತೆ ನೀಡಲಾಗುವುದು.

ಅರ್ಜಿ ಆಹ್ವಾನಿಸಿದ ಹುದ್ದೆಗಳಿಗೆ ಈ ಮೇಲಿನ ಕೋಷ್ಟಕದಲ್ಲಿ ವಿವರಿಸಿರುವ ಕನಿಷ್ಠ ವಿದ್ಯಾರ್ಹತೆ, ಅನುಭವ ಮತ್ತು ಅರ್ಹತೆಗಳನ್ನು ಕಡ್ಡಾಯವಾಗಿ ಹೊಂದಿರಬೇಕು.

7. ಕರ್ನಾಟಕ ಸರ್ಕಾರದ ನಿಯಮಗಳನ್ವಯ, ಪಾರದರ್ಶಕ ಆಯ್ಕೆ ವಿಧಾನ ಅಳವಡಿಸಲಾಗಿದ್ದು, ಯಾವುದೇ ಅಭ್ಯರ್ಥಿಯು ಈ ಮೇಲೆ ವಿವರಿಸಿರುವ ಷರತ್ತುಗಳನ್ನು ಹಾಗೂ ನಿಬಂಧನೆಗಳನ್ನು ಪಾಲಿಸದಿದ್ದಲ್ಲಿ ಸದರಿ ಅಭ್ಯರ್ಥಿಯ ಅರ್ಜಿಯನ್ನು ತಿರಸ್ಕರಿಸಲಾಗುವುದು.

8. ಗುತ್ತಿಗೆಯ ಅಥವಾ ಹೊರಗುತ್ತಿಗೆಯ ಅವಧಿ: ಮೇಲಿನ ಹುದ್ದೆ ಸಂಪೂರ್ಣವಾಗಿ ತಾತ್ಕಾಲಿಕ ಹುದ್ದೆಯಾಗಿದ್ದು, ಒಂದು ವರ್ಷದ ಅವಧಿಗೆ ಗುತ್ತಿಗೆ ಅಥವಾ ಹೊರಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳಲಾಗುವುದು. ನಂತರ ಕಾಲಕಾಲಕ್ಕೆ ಅವರ ಕಾರ್ಯಕ್ಷಮತೆಯನ್ನು ಪರಿಶೀಲಿಸಿ ಮತ್ತು ಅನುಗುಣವಾಗಿ ನವೀಕರಿಸಲಾಗುವುದು. ಒಂದೊಮ್ಮೆ ಅಭ್ಯರ್ಥಿಯ ಕಾರ್ಯಕ್ಷಮತೆ ನಿರೀಕ್ಷಿತ ಮಟ್ಟದಲ್ಲಿ ಇಲ್ಲದಿದ್ದರೆ ಅಂತಹ ಅಭ್ಯರ್ಥಿಗಳ ಕರಾರು ಒಪ್ಪಂದವನ್ನು ಒಂದು ತಿಂಗಳ ನೋಟೀಸ್ ನೀಡಿ ರದ್ದುಪಡಿಸಲಾಗುವುದು.

9. ವಯೋಮಾನ: ಪ್ರಕಟಣೆ ಹೊರಡಿಸಿದ ದಿನಾಂಕಕ್ಕೆ 45 ವರ್ಷಗಳು ಮೀರಿರಬಾರದು
10. ನಿಗದಿತ ಅರ್ಜಿ ನಮೂನೆಯಲ್ಲಿ ಆನ್‌ಲೈನ್ ಮೂಲಕ ಸಲ್ಲಿಸುವುದು.
11. ಸ್ನಾತಕ / ಸ್ನಾತಕೋತ್ತರ ಪದವಿಯನ್ನು ದೂರ ಶಿಕ್ಷಣ ಮುಖಾಂತರ ಪಡೆದಿದ್ದರೆ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ. ಹಾಗೂ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
12. ಆಯ್ಕೆಯಾದ ಅಭ್ಯರ್ಥಿಯು ಇಲಾಖೆಯ ಅಥವಾ ಹೊರಗುತ್ತಿಗೆ ಸಂಸ್ಥೆಯೊಂದಿಗೆ ನಿಗದಿತ ನಮೂನೆಯಲ್ಲಿ ಕರಾರು ಒಪ್ಪಂದವನ್ನು ಮಾಡಿಕೊಳ್ಳಬೇಕು ಹಾಗೂ ಕಾರ್ಯಾನುಭವದ ಆಧಾರದ ಮೇಲೆ ಮಾಸಿಕ ಸಮಾಲೋಚನಾ ಶುಲ್ಕ ನಿಗದಿಪಡಿಸಲಾಗುವುದು.
13. ಕರಾರು ಒಪ್ಪಂಧ ಮಾಡಿಕೊಂಡ ಅಭ್ಯರ್ಥಿಗೆ ಇಲಾಖೆಯಲ್ಲಿನ ಯಾವುದೇ ಹುದ್ದೆಗಳಲ್ಲಿ ವಿಲೀನಗೊಳ್ಳಲು/ ಮುಂದುವರೆಯಲು ಯಾವುದೇ ಹಕ್ಕು ಇರುವುದಿಲ್ಲ.
14. ಕಿರುಪಟ್ಟಿ ಮಾಡಿದ ಅಭ್ಯರ್ಥಿಗಳಿಗೆ (Shortlisted candidates) ಅವರುಗಳಿಗೆ ಮಾತ್ರ ದೂರವಾಣಿ ಮುಖಾಂತರ ತಿಳಿಸಲಾಗುವುದು.
15. ಅರ್ಹ ಅಭ್ಯರ್ಥಿಗಳಿಗೆ ಸಂದರ್ಶನವನ್ನು ಜಿಲ್ಲಾಪಂಚಾಯಿತಿ ಕಛೇರಿಯಲ್ಲಿ ನಡೆಸಲಿದ್ದು, ನಿಗದಿಪಡಿಸಿದ ದಿನಾಂಕ ಮತ್ತು ವೇಳೆಯಲ್ಲಿ ಹಾಜರಾಗುವುದು ಹಾಗೂ ಸಂದರ್ಶನದಲ್ಲಿ ಆಯ್ಕೆಯಾದ ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷೆಯನ್ನು ನಡೆಸಲಿದ್ದು, ನಿಗದಿಪಡಿಸಿದ ದಿನಾಂಕ ಮತ್ತು ವೇಳೆಯಲ್ಲಿ ಪರೀಕ್ಷೆಗೆ ಹಾಜರಾಗುವುದು.
16. ನೇಮಕಾತಿಯನ್ನು ಪೂರ್ಣವಾಗಿ ಮತ್ತು ಭಾಗಶ: ರದ್ದು ಮಾಡುವ/ ಮುಂದೂಡುವ / ಬದಲಾವಣೆ ಮಾಡುವ ಹಕ್ಕನ್ನು ಇಲಾಖೆಯು ಹೊಂದಿರುತ್ತದೆ.
17. ಜಿಲ್ಲಾ ಪಂಚಾಯಿತಿಯ ಹುದ್ದೆಗಳು ಜಿಲ್ಲಾಮಟ್ಟದ ಹುದ್ದೆಯಾಗಿರುವುದರಿಂದ ಆಯ್ಕೆಯಾದ ಅಭ್ಯರ್ಥಿಗಳು ಜಿಲ್ಲಾಮಟ್ಟದಲ್ಲಿ ಕಾರ್ಯನಿರ್ವಹಿಸಬೇಕಾಗಿರುತ್ತದೆ.

ಈ ಮೇಲ್ಕಂಡ ಎಲ್ಲಾ ದಾಖಲಾತಿ ಪರಿಶೀಲನೆ ಹಾಗು ಮೇರಿಟ್ಪಟ್ಟಿಯನ್ನು ಸಿದ್ದಪಡಿಸಿರುವ ಪ್ರಕ್ರಿಯೆಯನ್ನು ಹೊರಗುತ್ತಿಗೆ ಮಾನವ ಸಂಪನ್ಮೂಲ ಸಂಸ್ಥೆಯು ನಿರ್ವಹಿಸುವುದು.

ಹೆಚ್ಚಿನ ಮಾಹಿತಿಗಾಗಿ: ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ವಿಭಾಗ, ಚಿಕ್ಕಮಗಳೂರು ಇವರನ್ನು ಸಂಪರ್ಕಿಸುವುದು. ದೂಸಂಖ್ಯೆ: 08262-295795, ಇಮೇಲ್- eerwsckm@gmail.com

ಕಾರ್ಯಪಾಲಕ ಇಂಜಿನಿಯರ್,
ಗ್ರಾಮೀಣ ಕುಡಿಯುವ ನೀರು& ನೈರ್ಮಲ್ಯ ವಿಭಾಗ, ಚಿಕ್ಕಮಗಳೂರು.

ಪ್ರತಿಯನ್ನು :

1. ನಿರ್ದೇಶಕರು, ಗ್ರಾಮೀಣ ಕುಡಿಯುವ ನೀರು & ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು ರವರಿಗೆ ಮಾಹಿತಿಗಾಗಿ ಸಲ್ಲಿಸಲಾಗಿದೆ.
2. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು & ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು ರವರಿಗೆ ಮಾಹಿತಿಗಾಗಿ ಸಲ್ಲಿಸಲಾಗಿದೆ.
3. ಅಧೀಕ್ಷಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು & ನೈರ್ಮಲ್ಯ ವೃತ್ತ, ಕುವೆಂಪುನಗರ ಮೈಸೂರು ರವರಿಗೆ ಮಾಹಿತಿಗಾಗಿ ಸಲ್ಲಿಸಲಾಗಿದೆ.
4. ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾಪಂಚಾಯಿತಿ, ಚಿಕ್ಕಮಗಳೂರು ರವರಿಗೆ ಮಾಹಿತಿಗಾಗಿ ಸಲ್ಲಿಸಲಾಗಿದೆ.
5. ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಗ್ರಾ.ಕು.ನೀ & ನೈ. ಉ.ವಿಭಾಗ, ಚಿಕ್ಕಮಗಳೂರು, ಕಡೂರು, ಕೊಪ್ಪ, ಮೂಡಿಗೆರೆ, ಎನ್.ಆರ್.ಪುರ, ಶೃಂಗೇರಿ ತರೀಕೆರೆ ರವರಿಗೆ ಮಾಹಿತಿಗಾಗಿ ಕಳುಹಿಸಿದೆ.
6. ಎನ್.ಐ.ಸಿ, ಜಿಲ್ಲಾಪಂಚಾಯಿತಿ, ಚಿಕ್ಕಮಗಳೂರು ರವರಿಗೆ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ

ಕಾರ್ಯಪಾಲಕ ಇಂಜಿನಿಯರ್,
ಗ್ರಾಮೀಣಕುಡಿಯುವ ನೀರು& ನೈರ್ಮಲ್ಯ ವಿಭಾಗ,
ಚಿಕ್ಕಮಗಳೂರು.